13.12.24

(23)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೇಶವ್ ಪ್ರಸಾದ್. ಎಸ್. ಇವರು**

**ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಪ್ರಶ್ನೆಗೆ ಉತ್ತರ**

**ವಿಷಯ:** ಹೊಸ ದಿಗಂತ ದಿನಪತ್ರಿಕೆಯಲ್ಲಿ "ಅಧಿಕಾರಿಗಳ ಬಂಡತನಕ್ಕೆ ಕೃಷ್ಣಕೊಳ್ಳದ ರೈತರು ಕಂಗಾಲು" ಎಂಬ ತಲೆಬರಹದಲ್ಲಿ ಪ್ರಕಟವಾದ ಈ ಕೆಳಕಂಡ ವರದಿಯನ್ನು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

ಉತ್ತರ ಕರ್ನಾಟಕದ ಜೀವನದಿಯಾದ ಕೃಷ್ಣಾ ಕೊಳ್ಳದ ಯೋಜನೆಗಳು ನೆನೆಗುದಿಗೆ ಬಿದ್ದು, ಈ ಭಾಗದ ಜನರು ಕಣ್ಣೀರಲ್ಲಿ ಕೈತೊಳೆಯುತ್ತಿರುವ ನಡುವೆ ಉನ್ನತ ಮಟ್ಟದ ಅಧಿಕಾರಿಗಳ ಭಂಡತನಕ್ಕೆ ಈ ಭಾಗದ ಜನರು ಮತ್ತಷ್ಟು ಕಂಗಾಲಾಗುವಂತಾಗಿದೆ. ಆಲಮಟ್ಟಿಯಲ್ಲಿ ಕೃಷ್ಣಾ ನದಿ ನೀರಾವರಿ ಯೋಜನೆಗಳಿದ್ದರೆ ಇದಕ್ಕೆ ಸಂಬಂಧಿಸಿದ ವ್ಯವಸ್ಥಾಪಕ ನಿರ್ದೇಶಕರ ಕಚೇರಿ ಬೆಂಗಳೂರಿನಲ್ಲಿದೆ. ಈ ಭಾಗದ ರೈತರು ಹಾಗೂ ಸಂತ್ರಸ್ಥರು ತಮ್ಮ ಕೆಲಸ ಕಾರ್ಯಗಳಿಗಾಗಿ ದಶಕಗಳಿಂದ ಬೆಂಗಳೂರಿಗೆ ಅಲೆದಾಡುವುದು ತಪ್ಪಿಸಲು ಬೆಂಗಳೂರಿನಿಂದ ಕೃಷ್ಣಾ ಭಾಗ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಕಚೇರಿಯನ್ನು ವಿಜಯಪುರ ಜಿಲ್ಲೆಯ ಆಲಮಟ್ಟಿಗೆ ಸ್ಥಳಾಂತರಿಸುವಂತೆ ರೈತರು ಒತ್ತಾಯಿಸುತ್ತಿದ್ದ ಕಾರಣ, ಸರ್ಕಾರ ಈ ಕಚೇರಿ ಸ್ಥಳಾಂತರಕ್ಕೆ ಆದೇಶ ನೀಡಿದ್ದರೂ, ಉನ್ನತ ಮಟ್ಟದ ಅಧಿಕಾರಿಗಳು ಸ್ಥಳಾಂತರಕ್ಕೆ ಸಿದ್ಧರಿಲ್ಲ.

ಕಛೇರಿ ಸ್ಥಳಾಂತರಕ್ಕೆ ಆದೇಶಿಸುವಂತೆ ಕೋರಿ ಉಚ್ಚ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು 2021ರಲ್ಲಿ ಸಲ್ಲಿಸಲಾಗಿತ್ತು. ಆಗ ಉಚ್ಚ ನ್ಯಾಯಾಲಯವು ಕೆಬಿಜೆಎನ್ಎಲ್ ಕಛೇರಿ ತನ್ನ ಸಿಬ್ಬಂದಿಯೊಂದಿಗೆ ಆಲಮಟ್ಟಿಗೆ ಸ್ಥಳಾಂತರಗೊಂಡು ವರದಿ ಸಲ್ಲಿಸುವಂತೆ ಆದೇಶಿಸಿತ್ತು. ಆದರೆ, ಹೈಕೋರ್ಟ್ ಆದೇಶ ಹೊರಡಿಸಿದ್ದರೂ ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿ, ಈ ಕಛೇರಿ ಸ್ಥಳಾಂತರ ಆಗದೇ ಬೆಂಗಳೂರಿನಿಂದಲೇ ಕಾರ್ಯ ನಿರ್ವಹಿಸುತ್ತಿರುವುದು ದುರಂತ. ಅಲ್ಲದೇ ಕಛೇರಿ ಸ್ಥಳಾಂತರ ಮಾಡಲಾಗಿದೆ ಎಂದು ನ್ಯಾಯಾಲಯಕ್ಕೆ ಸುಳ್ಳು ಮಾಹಿತಿ ನೀಡುವ ಮೂಲಕ ನ್ಯಾಯಾಲಯದ ದಿಕ್ಕು ತಪ್ಪಿಸುವ ಕೆಲಸ ಮಾಡಲಾಗಿದೆ. ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸುವುದರ ಜೊತೆಗೆ ನ್ಯಾಯಾಲಯಕ್ಕೆ ಸುಳ್ಳು ಮಾಹಿತಿ ಸಲ್ಲಿಸಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಮತ್ತು ಕೂಡಲೆ ಕಚೇರಿಯನ್ನು ಆಲಮಟ್ಟಿಗೆ ಸ್ಥಳಾಂತರ ಮಾಡಬೇಕೆಂದು ಸರ್ಕಾರವನ್ನು ಆಗ್ರಹಿಸುತ್ತೇನೆ.

---

ಸರ್ಕಾರವು ದಿನಾಂಕ 10.01.2019ರ ಅಧಿಸೂಚನೆ ಸಂಖ್ಯೆ:ಪಿಡಿ 75 ಯೋಪರ 2018 ರ ಹಾಗೂ ದಿನಾಂಕ 30.10.2021 ರ ಆದೇಶ ಸಂಖ್ಯೆ:ಜಸಂಇ 333 ಎಸ್ಎಎಸ್ 2021ರ ಮೂಲಕ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಕಛೇರಿಯನ್ನು ಆಲಮಟ್ಟಿಗೆ ವರ್ಗಾಯಿಸಿ ಆದೇಶಿಸಿದೆ. ಅದರಂತೆ, ನಿಗಮದ ನೋಂದಾಯಿತ ಕಛೇರಿಯನ್ನು ಬೆಂಗಳೂರಿನಿಂದ ಆಲಮಟ್ಟಿಗೆ ವರ್ಗಾಯಿಸಿ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಬೆಂಗಳೂರಿನ ಕಛೇರಿಯನ್ನು ಸೀಮಿತ ಸಿಬ್ಬಂದಿಯೊಂದಿಗೆ ಸಂಪರ್ಕ ಕಛೇರಿಯಾಗಿ ಕಾರ್ಯನಿರ್ವಹಿಸಲು ದಿನಾಂಕ 02.05.2019ರ ಕಛೇರಿ ಆದೇಶವನ್ನು ಹೊರಡಿಸಲಾಗಿರುತ್ತದೆ.

ಗೌರವಾನ್ವಿತ ಉಚ್ಚ ನ್ಯಾಯಾಲಯದಲ್ಲಿ 2021ರಲ್ಲಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಗೆ (WP NO. 5563 of 2021) ಸಂಬಂಧಿಸಿದಂತೆ ನಿಗಮದಿಂದ ವಸ್ತುಸ್ಥಿತಿಯ ಮಾಹಿತಿಯನ್ನು ಅಗತ್ಯ ದಾಖಲೆಗಳೊಂದಿಗೆ ನ್ಯಾಯಾಲಯಕ್ಕೆ ಒದಗಿಸಿದ್ದು, ದಿನಾಂಕ 09.08.2024 ರಂದು ಮಾನ್ಯ ಉಚ್ಚ ನ್ಯಾಯಾಲಯವು "the Petition is not liable to be entertained and it is dismised" ಎಂದು ಆದೇಶಿಸಿರುತ್ತದೆ.

ಪ್ರಸ್ತುತ, ಆಲಮಟ್ಟಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರವರ ಕಛೇರಿಯೊಂದಿಗೆ ನಿಗಮದ ಆಡಳಿತ ಮತ್ತು ನೋಂದಾಯಿತ ಕಛೇರಿಯು ಕಾರ್ಯನಿರ್ವಹಿಸುತ್ತಿದೆ. ಇದಲ್ಲದೇ, ವಲಯ, ವೃತ್ತ, ವಿಭಾಗ ಹಾಗೂ ಉಪ ವಿಭಾಗ ಕಛೇರಿಗಳು ಆಲಮಟ್ಟಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈ ಭಾಗದ ರೈತರು ಹಾಗೂ ಸಂತ್ರಸ್ತರು ತಮ್ಮ ಕೆಲಸ ಕಾರ್ಯಗಳಿಗಾಗಿ ಅಹವಾಲುಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಆದರೆ, ಸರ್ಕಾರದಲ್ಲಿ ಕೃಷ್ಣಾ ಭಾಗ್ಯ ಜಲ ನಿಗಮಕ್ಕೆ ಸಂಬಂಧಿಸಿದಂತೆ ಆಗ್ಗಿಂದಾಗ್ಗೆ ನಡೆಯುವ ಸಭೆಗಳಿಗೆ ಮಾಹಿತಿಗಳನ್ನು ಒದಗಿಸುವುದು ಹಾಗೂ ಈ ಸಭೆಗಳಿಗೆ ನಿಗಮದ ಅಧಿಕಾರಿಗಳು ಹಾಜರಾಗುವುದು ಅತ್ಯಾವಶ್ಯಕವಾಗಿರುವುದರಿಂದ ಸೀಮಿತ ಸಿಬ್ಬಂದಿಗಳೊಂದಿಗೆ ಬೆಂಗಳೂರಿನ ಸಂಪರ್ಕ ಕಛೇರಿಯು ಕಾರ್ಯನಿರ್ವಹಿಸುತ್ತಿರುತ್ತದೆ.

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿ

ಸಂಖ್ಯೆ: ಜಸಂಇ 459 ಎಸ್‌ಎಎಸ್ 2024